## 1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು

## ಸಿ.ಸಿಃ 1146/2015

| | | |
|---|---|---|
| ಸಾಕ್ಷಿದಾರರ ಹೆಸರು | **ಬಸವಣ್ಣ** | ಪ್ರಾಸಾಃ 7 |
| ತಂದೆಯ/ಗಂಡನ ಹೆಸರು | ಪುಟ್ಟಮಾದನಾಯ್ಕ | ಚಾಸಾಃ 8 |
| ವಯಸ್ಸು | 45 ವರ್ಷ | |
| ಕೆಲಸ | ಕೂಲಿ ಕೆಲಸ | ಸಾ ಪ್ರ ಬೋ |
| ವಾಸ | ಟಿ.ನರಸಿಪುರ ಗ್ರಾಮ | ದಿಃ 24/06/2024 |

**ಮುಖ್ಯ ವಿಚಾರಣೆ ಪ್ರಾಜ್ಞ ಸ.ಸ.ಅ ರವರಿಂದಃ**

ಸಾಕ್ಷಿಗೆ ಒಂದು ದಾಖಲಾತಿ ತೋರಿಸಿದ್ದು ಅದು ಅಮಾನತ್ತು ಪಂಚನಾಮೆ ಯಾಗಿದ್ದು, ಅಮಾನತ್ತು ಪಂಚನಾಮೆ ಯಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅಮಾನತ್ತು ಪಂಚನಾಮೆ ಯನ್ನು ಈಗಾಗಲೇ ನಿಪಿ-6 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-6(ಸಿ) ಎಂದು ಗುರುತಿಸಲಾಯಿತು. ನಿಪಿ-6 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಆರೋಪಿಯನ್ನು ನೋಡಲು ಠಾಣೆಗೆ ಹೋದಾಗ ಪೊಲೀಸರು ನನ್ನ ಸಹಿಯನ್ನು ಪಡೆದಿರುತ್ತಾರೆ. ನನ್ನ ಸಮಕ್ಷಮ ಪೊಲೀಸರು ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಾಹನ ಮತ್ತು ಹಣವನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಪ್ರಾಜ್ಞ ಸ.ಸ.ಅ ರವರಿಂದಃ**

ದಿನಾಂಕ 03.08.2014 ರಂದು ನನ್ನ ಮತ್ತು ಚಾಸಾ-6 ಮತ್ತು 7 ರವರ ಸಮಕ್ಷಮ ಮಧ್ಯಾಹ್ನ 2.30 ರಿಂದ 3.30 ರವರೆಗೆ ನಗರ್ಲೆ ಗ್ರಾಮದ ಆರೋಪಿಯ ವಾಸದ ಮನೆಯ ಮುಂಭಾಗ ಆರೋಪಿಯು ತಾನೇ ತೋರಿಸಿದ ತನ್ನ ಮನೆಯ ಮುಂಭಾಗ ಪೊಲೀಸರು ಪಂಚನಾಮೆ ಮಾಡಿ ಅರೋಪಿಯ ಮನೆಯ ಮುಂಭಾಗ ನಿಲ್ಲಿಸಿದ್ದ ಕೃತ್ಯಕ್ಕೆ ಬಳಸಿದ್ದ ಗೂಡ್ಸ್ ಆಟೋ ಸಂಖ್ಯೆ ಕೆಎ-09-ಬಿ-9254 ಮತ್ತು

ಆರೋಪಿಯು ಕಳ್ಳತನ ಮಾಡಿದ್ದ ಭತ್ತವನ್ನು ಮಾರಾಟ ಮಾಡಿ ತನ್ನ ಮನೆಯ ಟ್ರಂಕ್ ನಲ್ಲಿ ಇಟ್ಟಿದ್ದ 2,000/- ರೂಗಳನ್ನು ಹಾಜರುಪಡಿಸಿದ್ದರ ಮೇರೆಗೆ ನಮ್ಮಗಳ ಸಮಕ್ಷಮ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಇದೇ ವಿಚಾರವಾಗಿ ದಿನಾಂಕ 03.08.2014 ರಂದು ಈಗ ನನಗೆ ಓದಿ ಹೇಳಿದಂತೆ " ದಿನಾಂಕ 03.08.2014 ರಂದು -------- ನೋಡಿದರೆ ಗುರುತಿಸುತ್ತೇನೆ" ಎಂದು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯ ಭಾಗವನ್ನು ನಿಪಿ-10 ಎಂದು ಗುರುತಿಸಲಾಯಿತು. ಆರೋಪಿ ನನ್ನ ಭಾವ ಮೈದುನ. ಆದ್ದರಿಂದ ಈ ಮೇಲಿನ ಎಲ್ಲಾ ವಿಚಾರಗಳು ಗೊತ್ತಿದ್ದರೂ ಕೂಡ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**